# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಕಾರ್ಯದರ್ಶಿ, ವಾರ್ಡ್ ಸಮಿತಿ /ಸಹಾಯಕ ಇಂಜಿನಿಯರ್‌ರವರ ಕಛೇರಿ, ವೃಷಭಾವತಿನಗರ ವಾರ್ಡ್-58
(ಹಳೇ ವಾರ್ಡ್ ಸಂಖ್ಯೆ-102), 3ನೇ ಮುಖ್ಯರಸ್ತೆ, ಬಿ.ಇ.ಎಮ್.ಎಲ್. ಲೇಔಟ್, ಬೆಂಗಳೂರು-79.

ಸಂಖ್ಯೆ: ವಾ-102/ವಾ.ಸ./ಸಭಾನಡವಳಿ-47/2022-23 ದಿನಾಂಕ: 17/09/2022

## -:ಸಭೆಯ ನಡವಳಿಗಳು:-

ಮಾನ್ಯ ವಲಯ ಆಯುಕ್ತರ ಆದೇಶ ಸಂಖ್ಯೆ-ಜಆ(ಪ)ಪಿಆರ್/14/2022-23 ದಿನಾಂಕ: 05.09.2022 ರಂತೆ ಶ್ರೀಮತಿ ಡಾ. ಮಂಜುಳ ಡಿ. (ಆರೋಗ್ಯ ವೈದ್ಯಾಧಿಕಾರಿ, ಮಹಾಲಕ್ಷ್ಮೀಪುರಂ ವಿಭಾಗ, ಬಿಬಿಎಂಪಿ) ರವರನ್ನು ವೃಷಭಾವತಿನಗರ ವಾರ್ಡ್ ಸಂಖ್ಯೆ 58 ಕ್ಕೆ ನೂತನವಾಗಿ ನೋಡೆಲ್ ಅಧಿಕಾರಿಯಾಗಿ ನೇಮಕ ಮಾಡಿ ಆದೇಶಗೊಳಿಸಿರುತ್ತಾರೆ.

ಅದರಂತೆ, ಮಾನ್ಯ ನೋಡಲ್ ಅಧಿಕಾರಿಯವರ ಆದೇಶದಂತೆ, ದಿನಾಂಕ: 17/09/2022 ಶನಿವಾರದಂದು ಬೆಳಿಗ್ಗೆ 10.00 ಘಂಟೆಗೆ ವಾರ್ಡ್-58 (ಹಳೇ ವಾರ್ಡ್ ಸಂಖ್ಯೆ-102) ವೃಷಭಾವತಿನಗರ ವಾರ್ಡ್ ಮಟ್ಟದ ಸಮಿತಿ ಸಭೆಯನ್ನು ಆಯೋಜಿಸಲಾಯಿತು.

ಶ್ರೀ ಜಿ. ಪ್ರಕಾಶ್ ಸಮಿತಿಯ ಕಾರ್ಯದರ್ಶಿಗಳು ರವರು ಸಭೆಯನ್ನು ನಡೆಸುತ್ತಾ, ಸಾರ್ವಜನಿಕರ ಕುಂದು ಕೊರತೆಗಳು ಹಾಗೂ ವಾರ್ಡ್ ಅಭಿವೃದ್ಧಿಗೆ ಸಂಬಂದಿಸಿದಂತೆ ಹಾಗೂ ಕೋವಿಡ್-19 ವೈರಸ್‌ನ ಸೋಂಕಿನ ಬಗ್ಗೆ ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸುವುದು, ಮೂಲಭೂತ ಸೌಕರ್ಯಗಳನ್ನು ಒದಗಿಸಲು ಹಾಗೂ ಸಾರ್ವಜನಿಕರ ಹಿತರಕ್ಷಣೆಗಾಗಿ ವಿಶೇಷ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳುವ ಬಗ್ಗೆ ಚರ್ಚಿಸಲು ಸಭೆಯಲ್ಲಿ ಉಪಸ್ಥಿತರಾಗಿರುವ ಮಾನ್ಯ ನೋಡಲ್ ಅಧಿಕಾರಿಯವರಿಗೆ ಮತ್ತು ಸಭೆಗೆ ಆಗಮಿಸಿರುವ ಎಲ್ಲಾ ಅಧಿಕಾರಿಗಳಿಗೆ ಸಭೆಗೆ ಸ್ವಾಗತ ಕೋರುತ್ತಾ, ನೋಡಲ್ ಅಧಿಕಾರಿಯವರ ಅಧ್ಯಕ್ಷತೆಯಲ್ಲಿ ಸಭೆಯನ್ನು ಮುನ್ನಡೆಸಲಾಯಿತು.

ಕಾರ್ಯಕ್ರಮದ ಅಧ್ಯಕ್ಷರಾದ ಮಾನ್ಯ ನೂತನ ನೋಡೆಲ್ ಅಧಿಕಾರಿರವರು ಮಾತನಾಡುತ್ತಾ, ಸಭೆಯಲ್ಲಿ ಉಪಸ್ಥಿತರಿದ್ದ ಎಲ್ಲಾ ಇಲಾಖೆಗಳ ಅಧಿಕಾರಿಗಳು ಹಾಗೂ ಸ್ಥಳೀಯ ನಾಗರಿಕರೊಂದಿಗೆ ತಮ್ಮ ಪರಿಚಯವನ್ನು ಸಭೆಯಲ್ಲಿ ಹಂಚಿಕೊಂಡರು.

**ಸಭೆಗೆ ಹಾಜರಿದ್ದವರು:**

| | |
|---|---|
| 1 | ಶ್ರೀಮತಿ ಡಾ. ಮಂಜುಳ ಡಿ. (ಆರೋಗ್ಯ ವೈದ್ಯಾಧಿಕಾರಿ, ಮಹಾಲಕ್ಷ್ಮೀಪುರಂ ವಿಭಾಗ, ಬಿಬಿಎಂಪಿ), ನೋಡಲ್ ಅಧಿಕಾರಿಗಳು ಹಾಗೂ ವಾರ್ಡ್ ಸಮಿತಿ ಅಧ್ಯಕ್ಷರು, ವಾರ್ಡ್-102 |
| 2 | ಶ್ರೀ ಜಿ. ಪ್ರಕಾಶ್, ಕಾರ್ಯದರ್ಶಿ ಮತ್ತು ಸಂಚಾಲಕರು, ವಾರ್ಡ್ ಸಮಿತಿ ವಾ-102 ಹಾಗೂ ಸಹಾಯಕ ಅಭಿಯಂತರರು, ವಾರ್ಡ್-102. |
| 3 | ಶ್ರೀ ಜಿ. ಆರ್. ಗೋವಿಂದರಾಜುಲು, ಹಿರಿಯ ಆರೋಗ್ಯ ಪರಿವೀಕ್ಷಕರು, ವಾರ್ಡ್-102. |
| 4 | ಶ್ರೀ ಕೆ. ವಿ. ಲೊಕೇಶ್, ಹಿರಿಯ ವೆಟರಿನರಿ ಪರಿವೀಕ್ಷಕರು, ಮಹಾಲಕ್ಷ್ಮೀಪುರಂ ವಿಭಾಗ, ಬಿಬಿಎಂಪಿ. |
| 5 | ಶ್ರೀ ಎಮ್. ಹರೀಶ್, ತೆರಿಗೆ ಪರಿವೀಕ್ಷಕರು, ವಾರ್ಡ್-102, ಬಿಬಿಎಂಪಿ. |
| 6 | ಶ್ರೀ ಎಸ್.ಬಾಬು, ಕಿರಿಯ ಆರೋಗ್ಯ ಪರಿವೀಕ್ಷಕರು, (ಗುತ್ತಿಗೆ) ವಾರ್ಡ್-102. |
| 7 | ಶ್ರೀ ವಿನೋದ್ ಎಸ್, ಮಾರ್ಷಲ್, ವಾರ್ಡ್-102. |
| 8 | ಶ್ರೀ ಸೋಮಶೇಖರ್, ಎ.ಎಸ್.ಐ, ಕಾಮಾಕ್ಷೀಪಾಳ್ಯ ಪೊಲೀಸ್ ಠಾಣೆ. |
| 9 | ಶ್ರೀಮತಿ ವಿದ್ಯಾರಾಣಿ, ಆಶಾಕಾರ್ಯಕರ್ತೆ, ವಾರ್ಡ್-102. |
| 10 | ಶ್ರೀಮತಿ ಬೈಲಮ್ಮ, ಆಶಾಕಾರ್ಯಕರ್ತೆ, ವಾರ್ಡ್-102. |
| 11 | ಶ್ರೀ ರಾಜ್ ಕುಮಾರ್, ಸದಸ್ಯರು, ವಾರ್ಡ್ ಸಮಿತಿ ವಾರ್ಡ್-102. |

ಮು.ತಿ.ನೋ.

Scanned with Oken Scanner

| | |
|---|---|
| 12 | ಶ್ರೀ ರಂಗನಾಥ್ ಸಿ. ಸದಸ್ಯರು, ವಾರ್ಡ್ ಸಮಿತಿ ವಾರ್ಡ್-102. |
| 13 | ಶ್ರೀ ಚಂದ್ರಪ್ಪ, ಸದಸ್ಯರು, ವಾರ್ಡ್ ಸಮಿತಿ ವಾರ್ಡ್-102. |
| 14 | ಶ್ರೀ ದೇವರಾಜು, ಸದಸ್ಯರು, ವಾರ್ಡ್ ಸಮಿತಿ ವಾರ್ಡ್-102. |
| 15 | ಶ್ರೀ ಹೇಮಂತ್ ಕುಮಾರ್, ಸದಸ್ಯರು, ವಾರ್ಡ್ ಸಮಿತಿ ವಾರ್ಡ್-102. |
| 16 | ಶ್ರೀಮತಿ ಕೆ. ಗೌರಿ, ಸದಸ್ಯರು, ವಾರ್ಡ್ ಸಮಿತಿ ವಾರ್ಡ್-102. |
| 17 | ಶ್ರೀಮತಿ ಪ್ರೇಮ, ಸದಸ್ಯರು, ವಾರ್ಡ್ ಸಮಿತಿ ವಾರ್ಡ್-102. |

## ಸಭೆಯಲ್ಲಿ ಚರ್ಚಿಸಲಾದ ವಿಷಯಗಳು:

### 1) ಆರೋಗ್ಯ ಇಲಾಖೆ ಮತ್ತು ಕೋವಿಡ್-19 ಸಾಂಕ್ರಾಮಿಕ ರೋಗದ ಬಗ್ಗೆ:-

- ಮಾನ್ಯ ನೋಡಲ್ ಅಧಿಕಾರಿಯವರು ಸಭೆಯನ್ನು ಉದ್ದೇಶಿಸಿ ಮಾತನಾಡುತ್ತಾ, ವಾರ್ಡ್-102 ವೃಷಭಾವತಿನಗರ ವ್ಯಾಪ್ತಿಯಲ್ಲಿ ಕೆಲವು ಕೋವಿಡ್-19 ಸೋಂಕಿತರನ್ನು ಹೋಮ್ ಐಸೋಲೇಷನ್ ಮಾಡಲಾಗಿದ್ದು, ಇತ್ತೀಚೆಗೆ ಉಲ್ಬಣಗೊಳ್ಳುತ್ತಿರುವುದು ಕಡಿಮೆ ಆಗಿರುತ್ತದೆ. ಪ್ರತೀ ಬುಧವಾರದಂದು ವ್ಯಾಕ್ಸಿನೇಷನ್ ಮೇಳವನ್ನು ಹಮ್ಮಿಕೊಳ್ಳಲಾಗುತ್ತದೆ. ಇದುವರೆವಿಗೂ ವ್ಯಾಕ್ಸಿನೇಷನ್ ಪಡೆಯದ ಸಾರ್ವಜನಿಕರು ಈ ಸೌಲಭ್ಯವನ್ನು ಉಪಯೋಗಿಸಿಕೊಳ್ಳುವಂತೆ ಸಭೆಯಲ್ಲಿ ತಿಳಿಸಿದರು.
- ಮಾನ್ಯ ನೋಡಲ್ ಅಧಿಕಾರಿಯವರು ಮಾತನಾಡುತ್ತಾ, ವಾರ್ಡ್ ವ್ಯಾಪ್ತಿಯಲ್ಲಿ ಮಾದರಿ ನಮ್ಮ ಕ್ಲೀನಿಕ್ ಪ್ರಾರಂಭಿಸಲು ಯಾವುದೇ ಕಟ್ಟಡಗಳು ಲಭ್ಯವಿಲ್ಲದ ಕಾರಣ, ಹಾಲಿ ಹೊಲಿಗೆ ತರಬೇತಿ ಕೇಂದ್ರವಿರುವ ಕಟ್ಟಡವನ್ನು ಉಪಯೋಗಿಸಿಕೊಳ್ಳುವಂತೆ ಮಾನ್ಯ ಸಚಿವರು ಹಾಗೂ ಸ್ಥಳೀಯ ಶಾಸಕರು ಶ್ರೀ ಕೆ. ಗೋಪಾಲಯ್ಯ ರವರು ತಿಳಿಸಿರುತ್ತಾರೆ ಎಂದು ಸಭೆಯಲ್ಲಿ ತಿಳಿಸಿದರು.
- ಶ್ರೀ ಜಿ. ಪ್ರಕಾಶ್, ಕಾರ್ಯದರ್ಶಿ ರವರು ಮಾತನಾಡುತ್ತಾ, ಹಾಲಿ ಕಾರ್ಯನಿರ್ವಹಿಸುತ್ತಿರುವ ಹೊಲಿಗೆ ತರಬೇತಿ ಕೇಂದ್ರವನ್ನು ವಾರ್ಡ್ ಕಛೇರಿಯ ಆವರಣದಲ್ಲಿರುವ ಕಂದಾಯ ಶಾಖೆಯ ಮೊದಲನೇ ಮಹಡಿಯಲ್ಲಿ ಖಾಲಿ ಇರುವ ಕಟ್ಟಡದಲ್ಲಿ ಹೊಲಿಗೆ ತರಬೇತಿ ಕೇಂದ್ರವನ್ನು ನಡೆಸಲು ಸ್ಥಳ ಬದಲಾವಣೆ ಮಾಡಿಕೊಟ್ಟು, ಹಾಲಿ ಹೊಲಿಗೆ ತರಬೇತಿ ಕಟ್ಟಡವನ್ನು ಮಾದರಿ ನಮ್ಮ ಕ್ಲೀನಿಕ್ ಪ್ರಾರಂಭಿಸಲು ಉಪಯೋಗಿಸಿಕೊಳ್ಳುವ ಬಗ್ಗೆ ಸಭೆಯಲ್ಲಿ ಪ್ರಸ್ತಾಪಿಸಿದರು.
- ಸದರಿ ವಿಷಯಕ್ಕೆ ಸಂಬಂಧಿಸಿದಂತೆ ಸಭೆಯಲ್ಲಿ ಹಾಜರಿದ್ದ ಎಲ್ಲಾ ಸಮಿತಿ ಸದಸ್ಯರುಗಳು ಹಾಗೂ ಅಧಿಕಾರಿಗಳು ಒಪ್ಪಿಗೆಯನ್ನು ಸೂಚಿಸುತ್ತಾ, ಇದರಿಂದ ವಾರ್ಡ್ ವ್ಯಾಪ್ತಿಯ ನಾಗರೀಕರಿಗೆ ತುಂಬಾ ಅನುಕೂಲವಾಗುತ್ತದೆ ಎಂದು ಸಭೆಯಲ್ಲಿ ತಿಳಿಸಿದರು.

### 2) ಅಭಿಯಂತರರ ವಿಭಾಗದ ಬಗ್ಗೆ:-

- ಎಲ್ಲಾ ಸದಸ್ಯರು ಮಾತನಾಡುತ್ತಾ, ವಾರ್ಡ್ ವ್ಯಾಪ್ತಿಯಲ್ಲಿ ಸಾರ್ವಜನಿಕರ ಸುರಕ್ಷತೆಗಾಗಿ ಅಳವಡಿಸಲಾದ ಸಿಸಿ ಕ್ಯಾಮೆರಾಗಳು ಕೆಲಸ ನಿರ್ವಹಿಸುತ್ತಿರುವುದಿಲ್ಲ ಎಂದು ಸಭೆಯಲ್ಲಿ ದೂರಿದರು.
- ಸಹಾಯಕ ಅಭಿಯಂತರರು, ರವರು ಮಾತನಾಡುತ್ತಾ, ವಾರ್ಡ್ ವ್ಯಾಪ್ತಿಯಲ್ಲಿ ಅಳವಡಿಸಲಾದ ಸಿಸಿ ಕ್ಯಾಮೆರಾಗಳ ನೆಟ್‌ವರ್ಕಿಂಗ್ ಕೇಬಲ್‌ಗಳ ಸಂಪರ್ಕಗಳು ನಾನಾ ಕಾರಣಗಳಿಂದಾಗಿ ಕಡಿತಗೊಂಡಿದ್ದು, ಅವುಗಳ ನಿರ್ವಹಣೆ ಮತ್ತು ಹೊಸದಾಗಿ ಎಲ್ಲಾ ಸಿಸಿ ಕ್ಯಾಮೆರಾಗಳ ನೆಟ್‌ವರ್ಕಿಂಗ್ ಕೇಬಲ್‌ಗಳನ್ನು ಅಳವಡಿಸುವ ಕಾಮಗಾರಿಯು ಪ್ರಗತಿಯಲ್ಲಿರುತ್ತದೆ. ಸದರಿ ಕಾಮಗಾರಿಯು ಪೂರ್ಣಗೊಂಡ ನಂತರ ಎಲ್ಲಾ ಕ್ಯಾಮೆರಾಗಳು ಚಾಲ್ತಿಗೊಳ್ಳುವುದಾಗಿ ಸಭೆಯಲ್ಲಿ ತಿಳಿಸಿದರು.
- ಶ್ರೀಮತಿ ಪ್ರೇಮ, ವಾರ್ಡ್ ಸಮಿತಿ ಸದಸ್ಯರು ರವರು ಮಾತನಾಡುತ್ತಾ, ಸಣ್ಣಕ್ಕಿಬಯಲಿನ 1ನೇ ಮುಖ್ಯರಸ್ತೆ ಮತ್ತು 1ನೇ ಅಡ್ಡರಸ್ತೆಗಳಲ್ಲಿ ರಸ್ತೆಗುಂಡಿಗಳನ್ನು ಸರಿಪಡಿಸಬೇಕಾಗಿ ಸಭೆಯಲ್ಲಿ ಕೋರಿದರು.
- ಸಹಾಯಕ ಅಭಿಯಂತರರು, ರವರು ಮಾತನಾಡುತ್ತಾ, ಈಗಾಗಲೇ ರಸ್ತೆಗುಂಡಿಗಳನ್ನು ಮುಚ್ಚುವ ಕಾಮಗಾರಿಯು ಪ್ರಗತಿಯಲ್ಲಿದ್ದು, ಮಳೆ ನಿಂತ ನಂತರ ತುರ್ತಾಗಿ ರಸ್ತೆಗುಂಡಿಗಳನ್ನು ಮುಚ್ಚಲಾಗುವುದು ಎಂದು ಸಭೆಯಲ್ಲಿ ತಿಳಿಸಿದರು.

ಮು.ತಿ.ನೋ.

Scanned with Oken Scanner

3) **ಘನತ್ಯಾಜ್ಯ ನಿರ್ವಹಣೆ ವಿಭಾಗದ ಬಗ್ಗೆ:-**

- ಶ್ರೀ ಚಂದ್ರಪ್ಪ ಮತ್ತು ಶ್ರೀ ದೇವರಾಜ್, ಸದಸ್ಯರು, ವಾರ್ಡ್ ಸಮಿತಿ ರವರು ಮಾತನಾಡುತ್ತಾ, ಪಿಕೆಗಳು ರಸ್ತೆ ಬದಿಯಲ್ಲಿ ಕಸ ಗುಡಿಸಿದ ಕಸವನ್ನು ಚಾಪೆಗಳಲ್ಲಿ ತುಂಬಿಕೊಂಡು ಸಾಗಿಸುತ್ತಾರೆ ಎಂದು ತಿಳಿಸಿದರು.
- ಮಾನ್ಯ ನೋಡಲ್ ಅಧಿಕಾರಿಯವರು ಮಾತನಾಡುತ್ತಾ, ಪಿಕೆಗಳು ರಸ್ತೆ ಬದಿಯಲ್ಲಿ ಕಸ ಗುಡಿಸಿದ ನಂತರ ಆಟೋಗಳನ್ನು ಉಪಯೋಗಿಸಿಕೊಂಡು ಕಸವನ್ನು ಸಾಗಿಸುವಂತೆ ಕ್ರಮವಹಿಸಲು ಸಭೆಯಲ್ಲಿ ಹಾಜರಿದ್ದ ಶ್ರೀ ಬಾಬು, ಕಿರಿಯ ಆರೋಗ್ಯ ಪರಿವೀಕ್ಷಕರು ರವರಿಗೆ ತಿಳಿಸಿದರು.
- ಮುಂದುವರೆದು, ಮಾನ್ಯ ನೋಡಲ್ ಅಧಿಕಾರಿಯವರು ಮಾತನಾಡುತ್ತಾ, ಮುಂದಿನ ದಿನಗಳಲ್ಲಿ ವಾರ್ಡ್ ವ್ಯಾಪ್ತಿಯಲ್ಲಿ ತರಬೇತಿಗಾಗಿ ಬರುವಂತಹ ನರ್ಸಿಂಗ್ ಕಾಲೇಜ್ ವಿದ್ಯಾರ್ಥಿಗಳನ್ನು ಮಾರ್ಷಲ್‌ಗಳ ಜೊತೆಗೂಡಿಸಿ ಮನೆಯಿಂದ ಕಸ ಸಂಗ್ರಹಣೆ ಮಾಡುವ ಕಾರ್ಯದ ಬಗ್ಗೆ ಹಸಿ ಕಸ ಹಾಗೂ ಒಣ ಕಸವನ್ನು ಬೇರ್ಪಡಿಸಿ ಆಟೋಗಳಿಗೆ ನೀಡುವಂತೆ ಜಾಗೃತಿ ಮೂಡಿಸುವ ಕಾರ್ಯವನ್ನು ಹಮ್ಮಿಕೊಳ್ಳುವುದು ಮತ್ತು ಆಟೋಗಳಲ್ಲಿ ಪ್ರಚಾರ ಮಾಡುವಂತೆ ಶ್ರೀ ಬಾಬು, ಕಿರಿಯ ಆರೋಗ್ಯ ಪರಿವೀಕ್ಷಕರು ರವರಿಗೆ ಸಭೆಯಲ್ಲಿ ತಿಳಿಸಿದರು.

4) **ಪಶುಪಾಲನೆ ವಿಭಾಗದ ಬಗ್ಗೆ:-**

- ಎಲ್ಲಾ ಸದಸ್ಯರು ಮಾತನಾಡುತ್ತಾ, ಬೀದಿ ನಾಯಿಗಳ ಹಾವಳಿ ಹೆಚ್ಚಾಗಿರುತ್ತದೆ ಮತ್ತು ಕೋಳಿ ಅಂಗಡಿಗಳಿಂದ ಬರುವ ತ್ಯಾಜ್ಯಗಳನ್ನು ಎಲ್ಲೆಂದರಲ್ಲಿ ಬಿಸಾಡಿ ಗಲೀಜು ಮಾಡಿ ಸಾರ್ವಜನಿಕರಿಗೆ ತೊಂದರೆ ಉಂಟು ಮಾಡುತ್ತಿರುತ್ತಾರೆ ಎಂದು ಸಭೆಯಲ್ಲಿ ತಿಳಿಸಿದರು.
- ಮಾನ್ಯ ನೋಡೆಲ್ ಅಧಿಕಾರಿರವರು ಮಾತನಾಡುತ್ತಾ, ವಾರ್ಡ್ ವ್ಯಾಪ್ತಿಯಲ್ಲಿ ಬೀದಿ ನಾಯಿಗಳು ಹೆಚ್ಚಾಗಿದ್ದು ಈ ಬಗ್ಗೆ ಸಾರ್ವಜನಿಕರಿಂದ ದೂರುಗಳು ಹೆಚ್ಚಾಗುತ್ತಿರುತ್ತವೆ, ಆದುದರಿಂದ ಬೀದಿ ನಾಯಿಗಳಿಗೆ ರೇಬಿಸ್ ವ್ಯಾಕ್ಸಿನೇಷನ್ ಅಳವಡಿಸಲು ಕ್ರಮವಹಿಸುವಂತೆ ಹಾಗೂ ಕೋಳಿ ಅಂಗಡಿಗಳಿಂದ ಬರುವ ತ್ಯಾಜ್ಯಗಳನ್ನು ಎಲ್ಲೆಂದರಲ್ಲಿ ಬಿಸಾಡಿ ಗಲೀಜು ಮಾಡಿ ಸಾರ್ವಜನಿಕರಿಗೆ ತೊಂದರೆ ಉಂಟು ಮಾಡುತ್ತಿರುತ್ತಾರೆ. ಅಂತಹ ಅಂಗಡಿಗಳನ್ನು ಗುರುತಿಸಿ ಅವರಿಗೆ ನೋಟೀಸ್ ಜಾರಿ ಮಾಡಿ ಎಚ್ಚರಿಕೆ ನೀಡಲು ಕ್ರಮವಹಿಸುವಂತೆ ಶ್ರೀ ಕೆ. ವಿ. ಲೋಕೇಶ್, ಹಿರಿಯ ವೆಟರಿನರಿ ಪರಿವೀಕ್ಷಕರು ರವರಿಗೆ ಸಭೆಯಲ್ಲಿ ತಿಳಿಸಿದರು.
- ಸಭೆಯಲ್ಲಿ ಹಾಜರಿದ್ದ ಶ್ರೀ ಕೆ. ವಿ. ಲೋಕೇಶ್, ಹಿರಿಯ ವೆಟರಿನರಿ ಪರಿವೀಕ್ಷಕರು ರವರು ಮಾತನಾಡುತ್ತಾ, ಈಗಾಗಲೇ ಬೀದಿ ನಾಯಿಗಳಿಗೆ ರೇಬಿಸ್ ವ್ಯಾಕ್ಸಿನೇಷನ್ ಅಳವಡಿಸಲು ಕ್ರಮವಹಿಸಲಾಗುತ್ತಿರುತ್ತದೆ ಹಾಗೂ ಕೋಳಿ ಅಂಗಡಿಗಳಿಗೆ ನೋಟೀಸ್ ಜಾರಿ ಮಾಡಿ ಎಚ್ಚರಿಕೆ ನೀಡಲು ಕ್ರಮವಹಿಸಲಾಗುವುದು ಎಂದು ಸಭೆಯಲ್ಲಿ ತಿಳಿಸಿದರು.

5) **ಕಂದಾಯ ವಿಭಾಗದ ಬಗ್ಗೆ:-**

- ಮಾನ್ಯ ನೋಡಲ್ ಅಧಿಕಾರಿಯವರು ಮಾತನಾಡುತ್ತಾ, ಎಂದಿನಂತೆ ವಾರ್ಡ್ ವ್ಯಾಪ್ತಿಯಲ್ಲಿ ಸಂಗ್ರಹವಾದ ಕಂದಾಯದ ಮೊತ್ತ ಹಾಗೂ ಕಂದಾಯ ಸಂಗ್ರಹಣೆಗಾಗಿ ತೆಗೆದುಕೊಂಡಿರುವ ಕ್ರಮಗಳ ಬಗ್ಗೆ ವರದಿ ನೀಡುವಂತೆ ಕಂದಾಯ ಪರಿವೀಕ್ಷಕರು ವಾರ್ಡ್-102 ರವರಿಗೆ ತಿಳಿಸಿದರು.
- ಶ್ರೀ ಎಮ್. ಹರಿಶ್, ತೆರಿಗೆ ಪರಿವೀಕ್ಷಕರು, ವಾರ್ಡ್-102 ರವರು ಮಾತನಾಡುತ್ತಾ, ವಾರ್ಡ್ ವ್ಯಾಪ್ತಿಯಲ್ಲಿ ಸರಿಯಾದ ರೀತಿಯಲ್ಲಿ ಕಂದಾಯ ಸಂಗ್ರಹಣೆಯಾಗುತ್ತಿದ್ದು, ಕಂದಾಯ ಪಾವತಿಸದ ಕೆಲವು ಕಟ್ಟಡದ ಮಾಲೀಕರಿಗೆ ನೋಟೀಸ್ ಜಾರಿ ಮಾಡಲಾಗುತ್ತಿರುವುದಾಗಿ ಸಭೆಯಲ್ಲಿ ತಿಳಿಸಿದರು.
- ಮಾನ್ಯ ನೋಡೆಲ್ ಅಧಿಕಾರಿ ರವರು ಮಾತನಾಡುತ್ತಾ, ಮಾನ್ಯ ಆಯುಕ್ತರ ಸುತ್ತೋಲೆ ಸಂಖ್ಯೆ: ಇಎಲ್ಎನ್/ಕೇಂದ್ರ/ಪಿಆರ್/227/2022-23 ದಿನಾಂಕ: 02.09.2022 ರಂತೆ ಮುಂಬರುವ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಚುನಾವಣೆ ಸಂಬಂಧ ಪ್ರಕಟಿಸಲಾಗಿರುವ ಕರಡು ಮತದಾರರ ಪಟ್ಟಿ ಸಂಬಂಧ ಹಕ್ಕು ಮತ್ತು ಆಕ್ಷೇಪಣೆಗಳನ್ನು ಸಲ್ಲಿಸುವ ಅವಧಿಯನ್ನು ಇನ್ನೂ 7 ದಿನಗಳವರೆಗೆ ವಿಸ್ತರಿಸಲಾಗಿರುತ್ತದೆ ಎಂದು ತಿಳಿಸುತ್ತಾ, ಭಾರತ ಚುನಾವಣಾ ಆಯೋಗದ ನಿರ್ದೇಶನದಂತೆ ಮತದಾರರ ಗುರುತಿನ ಚೀಟಿಗೆ ನಮೂನೆ-6ಬಿ ರಂತೆ ಆಧಾರ್ ಲಿಂಕ್ ಮಾಡಿಸಬೇಕಾಗಿ ಸಭೆಯಲ್ಲಿ ತಿಳಿಸಿದರು.
- ಮುಂದುವರೆದು, ಭಾರತ ಚುನಾವಣಾ ಆಯೋಗದ ನಿರ್ದೇಶನದಂತೆ ಪ್ರಸ್ತುತ ಚಾಲ್ತಿಯಲ್ಲಿರುವ ಮತದಾರರ ಪಟ್ಟಿಯ ವಿಶೇಷ ಪರಿಷ್ಕರಣೆ ಕಾರ್ಯ ಚಟುವಟಿಕೆಗಳನ್ನು ಸಂಭಂಧಪಟ್ಟ ಅಧಿಕಾರಿಗಳು ಚುರುಕಾಗಿಸಬೇಕಾಗಿ ಸಭೆಯಲ್ಲಿ ತಿಳಿಸಿದರು.

ಪು.ತಿ.ನೋ.

Scanned with Oken Scanner

- ಮುಂದುವರೆದು, ಭಾರತ ಚುನಾವಣಾ ಆಯೋಗದ ನಿರ್ದೇಶನದಂತೆ ಪ್ರಸ್ತುತ ಚಾಲ್ತಿಯಲ್ಲಿರು ಮತದಾರರ ಪಟ್ಟಿಯ ವಿಶೇಷ ಪರಿಷ್ಕರಣೆ ಕಾರ್ಯ ಚಟುವಟಿಕೆಗಳನ್ನು ಸಂಭಂಧಪಟ್ಟ ಅಧಿಕಾರಿಗಳು ಚುರುಕಾಗಿಸಬೇಕಾಗಿ ಸಭೆಯಲ್ಲಿ ತಿಳಿಸಿದರು.

6) <u>ವಿದ್ಯುತ್ ವಿಭಾಗದ ಬಗ್ಗೆ:-</u>

- ಶ್ರೀ ರಂಗನಾಥ್ ಮತ್ತು ಶ್ರೀ ದೇವರಾಜ್, ವಾರ್ಡ್ ಸಮಿತಿ ಸದಸ್ಯರುಗಳು ಮಾತನಾಡುತ್ತಾ, ವಾರ್ಡ್ ವ್ಯಾಪ್ತಿಯ ಗಂಗಣ್ಣ ಬಡಾವಣೆ ಮತ್ತು ಎನ್.ಜಿ.ಓ.'ಸ್ ಕಾಲೋನಿಯ 4ನೇ ಮುಖ್ಯರಸ್ತೆ 4ನೇ ಡಿ ಅಡ್ಡರಸ್ತೆಗಳಲ್ಲಿ ಹಾಗೂ ರುದ್ರಮ್ಮ ರುದ್ರೇಗೌಡ ಕಲ್ಯಾಣ ಮಂಟಪದ ರಸ್ತೆಯಲ್ಲಿ ಬೀದಿ ದೀಪಗಳು ಹಾಳಾಗಿರುವುದಾಗಿ ಸಭೆಯಲ್ಲಿ ದೂರಿದರು.
- ಮಾನ್ಯ ನೋಡೆಲ್ ಅಧಿಕಾರಿರವರು ಮಾತನಾಡುತ್ತಾ, ವಾರ್ಡ್ ವ್ಯಾಪ್ತಿಯಲ್ಲಿ ಬಿದಿ ದೀಪಗಳಿಗೆ ಸಂಭಂದಿಸಿದಂತೆ ಯಾವುದೇ ದೂರುಗಳು ಕಂಡುಬಂದಲ್ಲಿ ಶೀಘ್ರವಾಗಿ ಪರಿಶೀಲಿಸಿ ಸೂಕ್ತ ಕ್ರಮವಹಿಸಲು ಬೀದಿ ದೀಪ ನಿರ್ವಹಣೆಯ ಗುತ್ತಿಗೆದಾರರಿಗೆ ತಿಳಿಸುವಂತೆ ಕಾರ್ಯದರ್ಶಿಗಳಿಗೆ ಸಭೆಯಲ್ಲಿ ತಿಳಿಸಿದರು.
- ಶ್ರೀ ಜೊ. ಪ್ರಕಾಶ್, ಕಾರ್ಯದರ್ಶಿ ರವರು ಮಾತನಾಡುತ್ತಾ, ಈಗಾಗಲೇ ವಾರ್ಡ್ ವ್ಯಾಪ್ತಿಯಲ್ಲಿ ರಾತ್ರಿ ವೇಳೆಯಲ್ಲಿ ಪ್ರತೀ ರಸ್ತೆಗಳನ್ನು ಸರ್ವೆ ಮಾಡಲಾಗಿದ್ದು, ಹಾಳಾಗಿರುವ ಬೀದಿ ದೀಪಗಳ ವಿವರಗಳನ್ನು ಕಾರ್ಯಪಾಲಕ ಅಭಿಯಂತರರು, ವಿದ್ಯುತ್ ವಿಭಾಗ, ಪಶ್ಚಿಮ ರವರಿಗೆ ಸಲ್ಲಿಸಲಾಗಿರುತ್ತದೆ. ಅದರಂತೆ, ಬೀದಿ ದೀಪ ನಿರ್ವಹಣೆಯ ಗುತ್ತಿಗೆದಾರರು ಕ್ರಮವಹಿಸಲು ಸೂಚಿಸಲಾಗುವುದು ಎಂದು ಸಭೆಯಲ್ಲಿ ತಿಳಿಸಿದರು.

7) <u>ಬೆಸ್ಕಾಂ ವಿಭಾಗದ ಬಗ್ಗೆ:-</u>

- ಶ್ರೀ ರಂಗನಾಥ್ ಮತ್ತು ಶ್ರೀಮತಿ ಪ್ರೇಮ, ಸದಸ್ಯರು, ವಾರ್ಡ್ ಸಮಿತಿ ರವರು ಮಾತನಾಡುತ್ತಾ, ಗಂಗಣ್ಣ ಬಡಾವಣೆ, ಮುನೇಶ್ವರ ದೇವಸ್ಥಾನದ ರಸ್ತೆ ಹಾಗೂ ತೋಟದ ರಸ್ತೆಗಳಲ್ಲಿ ಕೇಬಲ್‌ಗಳು ನೇತಾಡುತ್ತಿದ್ದು ಅದನ್ನು ಸರಿಪಡಿಸುವಂತೆ ಸಭೆಯಲ್ಲಿ ದೂರಿದರು.
- ಶ್ರೀ ದೇವರಾಜು, ಶ್ರೀ ರಂಗನಾಥ್ ಮತ್ತು ಶ್ರೀ ರಾಜ್‌ಕುಮಾರ್, ವಾರ್ಡ್ ಸಮಿತಿ ಸದಸ್ಯರುಗಳು, ಮಾತನಾಡುತ್ತಾ, ಎನ್.ಜಿ.ಓ.'ಸ್ ಕಾಲೋನಿ ಮತ್ತು ಸಣ್ಣಕ್ಕಿಬಯಲಿನಲ್ಲಿ ರಾತ್ರಿ ವೇಳೆಯಲ್ಲಿ 2 ಗಂಟೆಗೊಮ್ಮೆ ಪದೇ ಪದೇ ವಿದ್ಯುತ್ ಕಡಿತಗೊಳ್ಳುತ್ತಿರುವುದಾಗಿ ಸಭೆಯಲ್ಲಿ ದೂರಿದರು.
- ಮಾನ್ಯ ನೋಡೆಲ್ ಅಧಿಕಾರಿರವರು ಗೈರು ಹಾಜರಾದ ಸಹಾಯಕ ಅಭಿಯಂತರರು, ಬೆಸ್ಕಾಂ ರವರಿಗೆ ದೂರವಾಣಿ ಮುಖಾಂತರ ಸಂಪರ್ಕಿಸಿ ಮಾತನಾಡುತ್ತಾ, ಇನ್ನು ಮುಂದೆ ಪ್ರತೀ ಸಭೆಗೂ ತಪ್ಪದೇ ಹಾಜರಾಗುವಂತೆ ತಿಳಿಸುತ್ತಾ, ಸದರಿ ದೂರುಗಳಿಗೆ ಸಂಭಂಧಿಸಿದಂತೆ ಶೀಘ್ರವಾಗಿ ಸೂಕ್ತ ಕ್ರಮ ತೆಗೆದುಕೊಳ್ಳುವಂತೆ ಸಭೆಯಲ್ಲಿ ತಿಳಿಸಿದರು.
- ಮುಂದುವರೆದು, ಮಾನ್ಯ ನೋಡೆಲ್ ಅಧಿಕಾರಿರವರು ಮಾತನಾಡುತ್ತಾ, ಬೆಸ್ಕಾಂ ವತಿಯಿಂದ ಯಾವುದೇ ಅಧಿಕಾರಿಗಳು ಕಳೆದ ನಾಲ್ಕೈದು ಸಭೆಗಳಲ್ಲಿ ಭಾಗವಹಿಸದಿರುವ ಕಾರಣ, ಸಮಸ್ಯೆಗಳಿಗೆ ತೆಗೆದುಕೊಂಡಿರುವ ಕ್ರಮಗಳ ಬಗ್ಗೆ ಯಾವುದೇ ವರದಿಗಳು ಲಭ್ಯವಿರುವುದಿಲ್ಲ, ಆದುದರಿಂದ ಮಾನ್ಯ ಕರ್ನಾಟಕ ಸರ್ಕಾರದ ಆದೇಶ ಸಂಖ್ಯೆ: ನಅಇ 507 ಎಂಎನ್‌ವೈ 2012, ಬೆಂಗಳೂರು, ದಿನಾಂಕ: 02-11-2020 ರಂತೆ ಬೆಸ್ಕಾಂಗೆ ಸಂಬಂಧಿಸಿದ ಸಹಾಯಕ ಅಭಿಯಂತರರು ಅಥವಾ ತತ್ಸಮಾನ ಅಧಿಕಾರಿಯವರು ಬಿಬಿಎಂಪಿಯ ಆಯಾ ವಾರ್ಡ್‌ಗಳ ವ್ಯಾಪ್ತಿಯಲ್ಲಿನ ವಾರ್ಡ್ ಸಮಿತಿಗೆ ಸದಸ್ಯರಾಗಿರುತ್ತಾರೆ ಆದ ಕಾರಣ, ಬೆಸ್ಕಾಂ ಅಧಿಕಾರಿಗಳಿಗೆ ಮುಂದಿನ ಸಭೆಗಳಲ್ಲಿ ತಪ್ಪದೇ ಹಾಜರಾಗುವಂತೆ ತಿಳಿಸಿ ತಿಳುವಳಿಕೆ ಪತ್ರ ನೀಡುವಂತೆ ಕಾರ್ಯದರ್ಶಿಗಳಿಗೆ ಸಭೆಯಲ್ಲಿ ತಿಳಿಸಿದರು.

8) <u>ಬಿಡಬ್ಲ್ಯೂಎಸ್‌ಎಸ್‌ಬಿ ವಿಭಾಗದ ಬಗ್ಗೆ:-</u>

- ಶ್ರೀ ಹೇಮಂತ್ ಕುಮಾರ್, ವಾರ್ಡ್ ಸಮಿತಿ ಸದಸ್ಯರು ಮಾತನಾಡುತ್ತಾ, ಎನ್.ಜಿ.ಓ.'ಸ್ ಕಾಲೋನಿಯಲ್ಲಿ ಕುಡಿಯುವ ನೀರಿನ ಪ್ರೆಶರ್ ಕಡಿಮೆಯಿರುತ್ತದೆ ಹಾಗೂ 1ನೇ ಮುಖ್ಯರಸ್ತೆ 1ನೇ ಅಡ್ಡರಸ್ತೆಯಲ್ಲಿ ವಾಲ್ವ್ ಅಳವಡಿಸಲು ಹಲವಾರು ಬಾರಿ ದೂರು ನೀಡಿದ್ದರೂ ಸಹ ಯಾವುದೇ ಕ್ರಮ ಕೈಗೊಂಡಿರುವುದಿಲ್ಲವೆಂದು ಸಭೆಯಲ್ಲಿ ದೂರಿದರು.
- ಶ್ರೀ ರಂಗನಾಥ್, ವಾರ್ಡ್ ಸಮಿತಿ ಸದಸ್ಯರು ಮಾತನಾಡುತ್ತಾ, ವಾರ್ಡ್ ವ್ಯಾಪ್ತಿಯ 4ನೇ ಮುಖ್ಯರಸ್ತೆ, 4ನೇ 'ಜೆ' ಅಡ್ಡರಸ್ತೆ, ಬೋರಣ್ಣ ಹೋಟೆಲ್ ಹತ್ತಿರ ಮತ್ತು ಗಂಗಣ್ಣ ಬಡಾವಣೆಯ ಅಡ್ಡರಸ್ತೆಗಳಲ್ಲಿ ಮ್ಯಾನ್‌ಹೋಲ್‌ಗಳಿಂದ ತೆಗೆದ ಸಿಲ್ಟ್ ಅನ್ನು ತೆರವುಗೊಳಿಸಿರುವುದಿಲ್ಲ ಎಂದು ಸಭೆಯಲ್ಲಿ ದೂರಿದರು.

ಮು.ತಿ.ನೋ.

Scanned with Oken Scanner

- ಶ್ರೀ ಚಂದ್ರಪ್ಪ, ವಾರ್ಡ್ ಸಮಿತಿ ಸದಸ್ಯರು ಮಾತನಾಡುತ್ತಾ, ಮಾರುತಿನಗರದ ಶನಿಮಹಾತ್ಮ ದೇವಸ್ಥಾನದ ರಸ್ತೆಯಲ್ಲಿ ಹಾಗೂ 4ನೇ 'ಈ' ಅಡ್ಡರಸ್ತೆಯಲ್ಲಿ ಬಿ.ಡಬ್ಲ್ಯು.ಎಸ್.ಎಸ್.ಬಿ. ವತಿಯಿಂದ ರಸ್ತೆಯನ್ನು ಅಗೆದು ಹಾಗೇ ಬಿಟ್ಟಿರುತ್ತಾರೆ ಇದನ್ನು ಸರಿಪಡಿಸದೇ ಅಗೆದು ಹಾಗೇ ಬಿಟ್ಟಿರುತ್ತಾರೆ ಎಂದು ಸಭೆಯಲ್ಲಿ ದೂರಿದರು.
- ಮಾನ್ಯ ನೋಡಲ್ ಅಧಿಕಾರಿಯವರು ಮಾತನಾಡುತ್ತಾ, ಸ್ಥಳ ಪರಿಶೀಲಿಸಿ ಶೀಘ್ರವಾಗಿ ಸಮಸ್ಯೆಗಳನ್ನು ಪರಿಹರಿಸಲು ಕ್ರಮವಹಿಸಬೇಕಾಗಿ ಬಿ.ಡಬ್ಲ್ಯು.ಎಸ್.ಎಸ್.ಬಿ. ಅಧಿಕಾರಿಗಳಿಗೆ ತಿಳಿಸುವಂತೆ ಕಾರ್ಯದರ್ಶಿಗಳಿಗೆ ಸಭೆಯಲ್ಲಿ ತಿಳಿಸಿದರು.
- ಮುಂದುವರೆದು, ಮಾನ್ಯ ನೋಡಲ್ ಅಧಿಕಾರಿಯವರು ಮಾತನಾಡುತ್ತಾ, ಬಿ.ಡಬ್ಲ್ಯು.ಎಸ್.ಎಸ್.ಬಿ. ವತಿಯಿಂದ ಯಾವುದೇ ಅಧಿಕಾರಿಗಳು ಕಳೆದ ಸಭೆಗಳಲ್ಲಿ ಭಾಗವಹಿಸದಿರುವ ಕಾರಣ, ಸಮಸ್ಯೆಗಳಿಗೆ ತೆಗೆದುಕೊಂಡಿರುವ ಕ್ರಮಗಳ ಬಗ್ಗೆ ಯಾವುದೇ ವರದಿಗಳು ಲಭ್ಯವಿರುವುದಿಲ್ಲ, ಆದುದರಿಂದ ಮಾನ್ಯ ಕರ್ನಾಟಕ ಸರ್ಕಾರದ ಆದೇಶ ಸಂಖ್ಯೆ: ನಅಇ 507 ಎಂಎನ್‌ವೈ 2012, ಬೆಂಗಳೂರು, ದಿನಾಂಕ: 02-11-2020 ರಂತೆ ಬೆಸ್ಕಾಂಗೆ ಸಂಬಂಧಿಸಿದ ಸಹಾಯಕ ಅಭಿಯಂತರರು ಅಥವಾ ತತ್ಸಮಾನ ಅಧಿಕಾರಯವರು ಬಿಬಿಎಂಪಿಯ ಆಯಾ ವಾರ್ಡ್‌ಗಳ ವ್ಯಾಪ್ತಿಯಲ್ಲಿನ ವಾರ್ಡ್ ಸಮಿತಿಗೆ ಸದಸ್ಯರಾಗಿರುತ್ತಾರೆ ಆದ ಕಾರಣ, ಬೆಸ್ಕಾಂ ರವರಿಗೆ ಮುಂದಿನ ಸಭೆಗಳಲ್ಲಿ ತಪ್ಪದೇ ಹಾಜರಾಗುವಚಿತೆ ತಿಳಿಸಿ ತಿಳುವಳಿಕೆ ಪತ್ರ ನೀಡುವಂತೆ ಕಾರ್ಯದರ್ಶಿಗಳಿಗೆ ಸಭೆಯಲ್ಲಿ ತಿಳಿಸಿದರು.

9) **<u>ಪೊಲೀಸ್ ವಿಭಾಗದ ಬಗ್ಗೆ:-</u>**

- ಶ್ರೀ ಚಂದ್ರಪ್ಪ, ವಾರ್ಡ್ ಸಮಿತಿ ಸದಸ್ಯರುಗಳು ಮಾತನಾಡುತ್ತಾ, ಮಣಿವಿಲಾಸನ್ ಗಾರ್ಡನ್ ಮುನೇಶ್ವರ ದೇವಸ್ಥಾನದ ಹತ್ತಿರ ಮತ್ತು ಸಣ್ಣಕ್ಕಿಬಯಲಿನಲ್ಲಿ ಕೆಲವು ಪುಂಡ ಹುಡುಗರ ಗಾಂಜಾ ಹಾವಳಿ ಹೆಚ್ಚಾಗಿದ್ದು, ಇದರಿಂದಾಗಿ ಸಾರ್ವಜನಿಕರಿಗೆ ತುಂಬಾ ತೊಂದರೆಯಾಗುತ್ತಿರುವುದಾಗಿ ಸಭೆಯಲ್ಲಿ ದೂರಿದರು.
- ಶ್ರೀ ಹೇಮಂತ್ ಕುಮಾರ್, ಶ್ರೀ ರಾಜ್ ಕುಮಾರ್, ಶ್ರೀ ರಂಗನಾಥ್ ಮತ್ತು ಶ್ರೀ ದೇವರಾಜ್, ವಾರ್ಡ್ ಸಮಿತಿ ಸದಸ್ಯರುಗಳು ಮಾತನಾಡುತ್ತಾ, ಎನ್.ಜಿ.ಓ.'ಸ್ ಕಾಲೋನಿ ಮತ್ತು ಸಣ್ಣಕ್ಕಿಬಯಲಿನ ಬೃಹತ್ ನೀರು ಕಾಲುವೆಯ ಗಲ್ಲಿ ರಸ್ತೆಗಳಲ್ಲಿ ರಾತ್ರಿ ವೇಳೆಯ ಸಮಯದಲ್ಲಿ ಪುಂಡರು ಗಾಂಜಾ ವ್ಯಸನಿಗಳು ಸಾರ್ವಜನಿಕರಿಗೆ ತುಂಬಾ ತೊಂದರೆ ಉಂಟು ಮಾಡುತ್ತಿರುವುದಾಗಿ ಸಭೆಯಲ್ಲಿ ದೂರಿದರು.
- ಎಲ್ಲಾ ಸದಸ್ಯರು ಮಾತನಾಡುತ್ತಾ, ಸದರಿ ಸ್ಥಳಗಳಲ್ಲಿ ಕ್ರೈಮ್ ಬ್ರಾಂಚ್ ಪೊಲೀಸ್ ಅಧಿಕಾರಿಗಳನ್ನು ನಿಯೋಜಿಸುವಂತೆ ಸಭೆಯಲ್ಲಿ ಕೋರಿದರು.
- ಶ್ರೀ ಸೋಮಶೇಖರ್, ಎ.ಎಸ್.ಐ. ಕಾಮಾಕ್ಷಿಪಾಳ್ಯ ಪೊಲೀಸ್ ಠಾಣೆ ರವರು ಮಾತನಾಡುತ್ತಾ, ಸ್ಥಳ ಪರಿಶೀಲಿಸಿ ಮೇಲಾಧಿಕಾರಿಗಳಿಗೆ ವರದಿ ಸಲ್ಲಿಸಿ ಸೂಕ್ತ ಕ್ರಮ ಕೈಗೊಳ್ಳುತ್ತೇವೆ ಎಂದು ಸಭೆಯಲ್ಲಿ ತಿಳಿಸಿದರು.

ಮುಂದುವರೆದು, ಪ್ರತೀ ಸಭೆಯ ಸಭಾ ನಡವಳಿಗಳನ್ನು ವಾರ್ಡ್‌ಗೆ ಸಂಬಂಧಿಸಿದ ಎಲ್ಲಾ ಇಲಾಖೆಗಳ ಅಧಿಕಾರಿಗಳಿಗೆ ತಲುಪುವಂತೆ ಮಾಡಲು ಕಾರ್ಯದರ್ಶಿರವರಿಗೆ ಸೂಚಿಸಿದರು. ವಾರ್ಡ್‌ಗೆ ಸಂಬಂಧಿಸಿದ ಎಲ್ಲಾ ಇಲಾಖೆಗಳ ಅಧಿಕಾರಿಗಳು ಸಭಾ ನಡವಳಿಗಳಿಗೆ ಅನುಸಾರವಾಗಿ ತಮ್ಮ ಇಲಾಖೆಗೆ ಸಂಬಂಧಿಸಿದ ದೂರುಗಳನ್ನು ಪಟ್ಟಿ ಮಾಡಿಕೊಂಡು, ಸದರಿ ದೂರುಗಳ ಬಗ್ಗೆ ಕ್ರಮವಹಿಸಿರುವ ಕುರಿತು ಅಥವಾ ತೆಗೆದುಕೊಂಡಿರುವ ಕ್ರಮಗಳ ಬಗ್ಗೆ **ಪ್ರತೀ ವಾರ್ಡ್ ಸಮಿತಿ ಸಭೆಯಲ್ಲಿ** ವರದಿ ಮಾಡಲು ಹಾಗೂ **ವಾರ್ಡ್ ಕಮಿಟಿ ವಾರ್ಡ್-58 (ಹಳೇ ವಾರ್ಡ್ ಸಂಖ್ಯೆ-102) ವಾಟ್ಸ್ ಆಪ್ ಗ್ರೂಪ್** ನಲ್ಲಿ ವರದಿ ಮಾಡಲು ಸೂಚಿಸುತ್ತಾ, ಸಭೆಯನ್ನು ಮುಕ್ತಾಯ ಗೊಳಿಸಲಾಯಿತು. ಕೊನೆಯಲ್ಲಿ ಕಾರ್ಯದರ್ಶಿಗಳು ಸಭೆಗೆ ಆಗಮಿಸಿರುವ ಎಲ್ಲರಿಗೂ ವಂದಿಸಿದರು.

**ಕಾರ್ಯದರ್ಶಿ**
ಹಾಗೂ ಸಹಾಯಕ ಅಭಿಯಂತರರು,
ವಾರ್ಡ್ ಸಂಖ್ಯೆ-58

**ನೋಡಲ್ ಅಧಿಕಾರಿಗಳು**
ವಾರ್ಡ್ ಸಮಿತಿ, ವಾರ್ಡ್-58

<u>ಪ್ರತಿಯನ್ನು:-</u>

1. ಮಾನ್ಯ ವಲಯ ವಿಶೇಷ ಆಯುಕ್ತರು, ಪಶ್ಚಿಮ ವಲಯ ರವರ ಅವಗಾಹನೆಗೆ ತರಲು ಆಪ್ತ ಕಾರ್ಯದರ್ಶಿರವರಿಗೆ ಸಲ್ಲಿಸಿದೆ.
2. ಮಾನ್ಯ ಜಂಟಿ ಆಯುಕ್ತರು, ಪಶ್ಚಿಮ ವಲಯ ರವರ ಅವಗಾಹನೆಗೆ ತರಲು ಆಪ್ತ ಕಾರ್ಯದರ್ಶಿರವರಿಗೆ ಸಲ್ಲಿಸಿದೆ.
3. ಮಾನ್ಯ ಮುಖ್ಯ ಅಭಿಯಂತರರು, ಪಶ್ಚಿಮ ವಲಯ ರವರ ಅವಗಾಹನೆಗೆ ತರಲು ಮತ್ತು ಅಗತ್ಯ ಕ್ರಮಕ್ಕಾಗಿ ತಾಂತ್ರಿಕ ಸಹಾಯಕರಿಗೆ ಸಲ್ಲಿಸಿದೆ.

ಮು.ತಿ.ನೋ.

Scanned with Oken Scanner

4. ಮಾನ್ಯ ಆರೋಗ್ಯ ಅಧಿಕಾರಿಗಳು, ಪಶ್ಚಿಮ ವಲಯ ರವರ ಅವಗಾಹನೆಗೆ ತರಲು ಮತ್ತು ಅಗತ್ಯ ಕ್ರಮಕ್ಕಾಗಿ
5. ಮಾನ್ಯ ಅಧೀಕ್ಷಕ ಅಭಿಯಂತರರು, (ಘನತ್ಯಾಜ್ಯ ನಿರ್ವಹಣೆ) ರವರ ಅವಗಾಹನೆಗೆ ತರಲು ಮತ್ತು ಅಗತ್ಯ ಕ್ರಮ ಆಪ್ತ ಸಹಾಯಕರವರಿಗೆ ಸಲ್ಲಿಸಿದೆ.
6. ಮಾನ್ಯ ಅರಣ್ಯಾಧಿಕಾರಿಗಳು, ಅರಣ್ಯ ವಿಭಾಗ ರವರಿಗೆ ಅವಗಾಹನೆಗೆ ತರಲು ಮತ್ತು ಅಗತ್ಯ ಕ್ರಮಕ್ಕಾಗಿ ಆಪ್ತ ಸಹಾಯಕರವರಿಗೆ ಸಲ್ಲಿಸಿದೆ.
7. ಮಾನ್ಯ ಅಧೀಕ್ಷಕರು, ತೋಟಗಾರಿಕೆ ಇಲಾಖೆ ರವರ ಅವಗಾಹನೆಗೆ ತರಲು ಹಾಗೂ ಅಗತ್ಯ ಕ್ರಮಕ್ಕಾಗಿ ಸಹಾಯಕರಿಗೆ ಸಲ್ಲಿಸಿದೆ.
8. ವೈದ್ಯಕೀಯ ಆರೋಗ್ಯ ಅಧಿಕಾರಿಗಳು, (ಪಶ್ಚಿಮ ವಲಯ) ರವರ ಮಾಹಿತಿಗಾಗಿ ಮತ್ತು ಅಗತ್ಯ ಕ್ರಮಕ್ಕಾಗಿ ಸಲ್ಲಿಸಿದೆ.
9. ಕಾರ್ಯಪಾಲಕ ಅಭಿಯಂತರರು, ಮಹಾಲಕ್ಷ್ಮೀಪುರಂ ವಿಭಾಗ ರವರ ಮಾಹಿತಿಗಾಗಿ ಮತ್ತು ಅಗತ್ಯ ಕ್ರಮಕ್ಕಾಗಿ ಸಲ್ಲಿಸಿದೆ.
10. ಕಂದಾಯ ಅಧಿಕಾರಿಗಳು, ಮಹಾಲಕ್ಷ್ಮೀಪುರಂ ವಿಭಾಗ ರವರ ಮಾಹಿತಿಗಾಗಿ ಮತ್ತು ಅಗತ್ಯ ಕ್ರಮಕ್ಕಾಗಿ ಸಲ್ಲಿಸಿದೆ.
11. ಸಹಾಯಕ ಕಾರ್ಯಪಾಲಕ ಅಭಿಯಂತರರು ನಾಗಪುರ ಉಪವಿಭಾಗ ರವರಿಗೆ ಸೂಕ್ತ ಕ್ರಮವಹಿಸಲು ಸಲ್ಲಿಸಿದೆ.
12. ಸಹಾಯಕ ಕಂದಾಯ ಅಧಿಕಾರಿಗಳು ನಾಗಪುರ ಉಪವಿಭಾಗ ರವರ ಮಾಹಿತಿಗಾಗಿ ಮತ್ತು ಅಗತ್ಯ ಕ್ರಮಕ್ಕಾಗಿ ಸಲ್ಲಿಸಿದೆ.
13. ಸಹಾಯಕ ಕಾರ್ಯಪಾಲಕ ಅಭಿಯಂತರರು (ಪರಿಸರ ವಿಭಾಗ) ನಾಗಪುರ ಉಪವಿಭಾಗ ರವರ ಅಗತ್ಯ ಕ್ರಮಕ್ಕಾಗಿ ಸಲ್ಲಿಸಿದೆ.
14. ಸಹಾಯಕ ಕಾರ್ಯಪಾಲಕ ಅಭಿಯಂತರರು, ವಿದ್ಯುತ್ ವಿಭಾಗ ರವರಿಗೆ ಸೂಕ್ತ ಕ್ರಮ ವಹಿಸಲು ಸಲ್ಲಿಸಿದೆ.
15. ಎಲ್ಲಾ ಸಂಬಂಧಪಟ್ಟವರ ಮಾಹಿತಿಗಾಗಿ ಮತ್ತು ಅಗತ್ಯ ಕ್ರಮಕ್ಕಾಗಿ ಸಲ್ಲಿಸಿದೆ.
16. ಕಛೇರಿಯ ಕಡತಕ್ಕೆ.

Scanned with Oken Scanner

ವಾರ್ಡ್ ಸಂಖ್ಯೆ - 102 ವೃಷಭಾವತಿ ನಗರ

ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ದಿನಾಂಕ: 17/09/2022 ರಂದು ಬೆಳಗ್ಗೆ 10.00 ಗಂಟೆಗೆ ಸಭೆಯನ್ನು ಹಮ್ಮಿಕೊಳ್ಳಲಾಗಿದ್ದು ಸಭೆಯಲ್ಲಿ ಭಾಗವಹಿಸಿದ ಅಧಿಕಾರಿಗಳು RWA ರವರ ಹಾಜರಾತಿಯನ್ನು ಪಡೆದುಕೊಳ್ಳುವ ಬಗ್ಗೆ

| ಕ್ರಮ ಸಂಖ್ಯೆ | ಹೆಸರು | ಪದನಾಮ | ಮೊಬೈಲ್ ಸಂಖ್ಯೆ | ಸಹಿ |
|---|---|---|---|---|
| 1) | ಡಾ. ಮಂಜುಳ. ಡಿ | ಆರೋಗ್ಯ ವೈದ್ಯಾಧಿಕಾರಿಗಳು. | 9480688585 | Manju |
| 2) | ಪ್ರಕಾಶ್. ಜಿ. | AE, W-102 ಕಾರ್ಯಪಡೆ | 9845236847 | [signature] 17/9/2022 |
| 3) | ಗೋವಿಂದರಾಜುಲು | SHI | 9845512187 | G. L. [signature] |
| 4) | Vidyarani | L/W | 8861637552 | Vis |
| 5) | Bylamma | L/W | 8970173422 | [signature] |
| 6) | Ranganath.C | ಸದಸ್ಯರು | 9341199998 | [signature] C |
| 7 | Harish.M | T.I | 7411692135 | [signature] |
| 8 | ರವಿಕುಮಾರ್ | ಸದಸ್ಯರು | 8553779344 | [signature] |
| 9 | Vinod.S | Marshal | 9663084662 | Vinod S |
| 10 | BABU.S | SHI 102 | 9632549661 | S. Babu |
| | | | | |

Scanned with Oken Scanner

| ಕ್ರಮ ಸಂಖ್ಯೆ | ಹೆಸರು | ಪದನಾಮ | ಮೊಬೈಲ್ ಸಂಖ್ಯೆ | ಸಹಿ |
| --- | --- | --- | --- | --- |
| 11) | ಸೋಮಶೇಖರ | ASI ತೋಟಗಾರಿಕೆ | 9742566691 | [signature] ASI |
| 12 | [illegible] | Sr. Vety. Inspector | 9480683056 | [signature] |
| | [illegible] | ಸದಸ್ಯರು | 9845763281 | [signature] |
| | [illegible] | ಸದಸ್ಯರು | 9632584986 | [signature] |
| | ಪ್ರೇಮ H.g | ಸದಸ್ಯರು | 7019633103 | Prema H.g |
| | K. ಗೌರಿ | ಸದಸ್ಯರು | 9740249333 | K. Gowri |
| | Hemanth kumar | ಸದಸ್ಯರು | 9741992319 | [signature] |
| | | | | |
| | | | | |
| | | | | |

Scanned with Oken Scanner

# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

...ದರ್ಶಿ, ವಾರ್ಡ್ ಸಮಿತಿ/ಸಹಾಯಕ ಅಭಿಯಂತರರವರ ಕಛೇರಿ, ವೃಷಭಾವತಿನಗರ, ವಾರ್ಡ್ ಸಂಖ್ಯೆ-102, 4ನೇ ಮುಖ್ಯರಸ್ತೆ,
ಬಿ.ಇ.ಎಮ್.ಎಲ್. ಬಡಾವಣೆ, ವೃಷಭಾವತಿನಗರ, ಬೆಂಗಳೂರು-560 079.


...ಸ.ಅ./ವಾರ್ಡ್-102/ವಾ.ಸ./ಪಿ.ಆರ್/47/2022-23 ದಿನಾಂಕ: 14/09/2022

## ಸಭಾ ಸೂಚನಾ ಪತ್ರ

ವಿಷಯ: ವೃಷಭಾವತಿನಗರ ವಾರ್ಡ್ ಸಂಖ್ಯೆ-102ರ ವಾರ್ಡ್‌ಮಟ್ಟದ ಕುಂದು ಕೊರತೆಗಳ ಬಗ್ಗೆ ಚರ್ಚಿಸಲು ವಾರ್ಡ್ ಸಮಿತಿ ಸಭೆಯನ್ನು ಆಯೋಜಿಸಿರುವ ಬಗ್ಗೆ.

ಉಲ್ಲೇಖ: ಮಾನ್ಯಆಯುಕ್ತರು, ಬಿಬಿಎಂಪಿ ರವರ ಕಛೇರಿ ಆದೇಶ ಪತ್ರ ಸಂಖ್ಯೆ: ಬಿ12(5)/ಪಿ.ಆರ್/35/2020-21 ದಿನಾಂಕ: 21.09.2020.

*************

ಮೇಲ್ಕಂಡ ವಿಷಯ ಹಾಗೂ ಉಲ್ಲೇಖಕ್ಕೆ ಸಂಬಂಧಿಸಿದಂತೆ, ಮಹಾಲಕ್ಷ್ಮೀಪುರಂ ವಿಭಾಗ, ನಾಗಪುರ ಉಪವಿಭಾಗ ವ್ಯಾಪ್ತಿಯ ವೃಷಭಾವತಿನಗರ ವಾರ್ಡ್ ಸಂಖ್ಯೆ 102ರ ಕಛೇರಿಯಲ್ಲಿ ದಿನಾಂಕ-17.09.2022 ರಂದು ಬೆಳಿಗ್ಗೆ-10.00ಗಂಟೆಗೆ ಮಾನ್ಯ ನೋಡಲ್ ಅಧಿಕಾರಿರವರ ಅಧ್ಯಕ್ಷತೆಯಲ್ಲಿ ವಾರ್ಡ್ ಸಮಿತಿ ಸಭೆಯನ್ನು ಹಮ್ಮಿಕೊಳ್ಳಲಾಗಿದ್ದು, ಸದರಿ ಸಭೆಗೆ ವಾರ್ಡ್‌ಗೆ ಸಂಬಂಧಪಟ್ಟ ಎಲ್ಲಾ ಇಲಾಖೆಯ ಅಧಿಕಾರಿಗಳು ಹಾಗೂ ಸ್ಥಳೀಯ ನಾಗರೀಕ ಕಲ್ಯಾಣ ಸಂಘಗಳ ಪ್ರತಿನಿಧಿಗಳು ಸಕಾಲದಲ್ಲಿ ಸಭೆಗೆ ತಪ್ಪದೇ ಹಾಜರಾಗಿ ವಾರ್ಡ್ ಅಭಿವೃದ್ಧಿ ಹಾಗೂ ಕುಂದು ಕೊರತೆಗಳ ಬಗ್ಗೆ ಮುಕ್ತವಾಗಿ ಚರ್ಚಿಸಿ ತಮ್ಮ ಅಮೂಲ್ಯ ಸಲಹೆ ಹಾಗೂ ಸೂಚನೆಗಳನ್ನು ನೀಡಲು ಹಾಗೂ ಕಾರ್ಯಕ್ರಮವನ್ನು ಯಶಸ್ವಿಗೊಳಿಸಲು ಕೋರಿದೆ.

ಸಭೆಯಲ್ಲಿ ಚರ್ಚಿಸಬಹುದಾದ ವಿಷಯಗಳು:- 1)ಕೋವಿಡ್-19 ಸಾಂಕ್ರಾಮಿಕರೋಗ ತಡೆಗಟ್ಟುವ ಬಗ್ಗೆ. 2) ಘನತ್ಯಾಜ್ಯ ಸಂಗ್ರಹಣೆ ಮತ್ತು ವಿಲೇವಾರಿ ಬಗ್ಗೆ. 3)ವಿದ್ಯುತ್ ದೀಪಗಳ ನಿರ್ವಹಣೆ ಬಗ್ಗೆ. 4)ಕುಡಿಯುವ ನೀರಿನ ಬಗ್ಗೆ. 5) ವಾರ್ಡ್ ಕುಂದು ಕೊರತೆಗಳ ಹಾಗೂ ಇತರೆ ಉಪಯುಕ್ತ ವಿಷಯಗಳ ಬಗ್ಗೆ.

ಕಾರ್ಯದರ್ಶಿ ಹಾಗೂ ಸಂಚಾಲಕರು
ವಾರ್ಡ್ ಸಮಿತಿ
ವಾರ್ಡ್ ಸಂಖ್ಯೆ-102

ಪ್ರತಿಯನ್ನು :- ಬಿಬಿಎಂಪಿ ರವರ ಮಾಹಿತಿಗಾಗಿ ಸಲ್ಲಿಸಿದೆ.

1. ಕೌನ್ಸಿಲ್ ಕಾರ್ಯದರ್ಶಿಗಳು, ಬಿಬಿಎಂಪಿ ರವರ ಮಾಹಿತಿಗಾಗಿ ಸಲ್ಲಿಸಿದೆ.
   ವಾರ್ಡ್ ಸಂಖ್ಯೆ-102 ವೃಷಭಾವತಿನಗರರವರಿಗೆ ಮಾಹಿತಿಗಾಗಿ ಸಲ್ಲಿಸಿದೆ.
2. ನೋಡಲ್ ಅಧಿಕಾರಿಗಳು ವಾರ್ಡ್ ಸಂಖ್ಯೆ-102 ವೃಷಭಾವತಿನಗರರವರಿಗೆ ಮಾಹಿತಿಗಾಗಿ ಸಲ್ಲಿಸಿದೆ.
3. ಅಧೀಕ್ಷಕರು (ತೋಟಗಾರಿಕೆ ಇಲಾಖೆ/ಅರಣ್ಯ ಇಲಾಖೆ) ಪಶ್ಚಿಮ ವಲಯ ರವರಿಗೆ ಮಾಹಿತಿಗಾಗಿ ಸಲ್ಲಿಸಿದೆ.
4. ಕಾರ್ಯಪಾಲಕ ಅಭಿಯಂತರರು (ಮಲಪು ವಿಭಾಗ) ರವರಿಗೆ ಮಾಹಿತಿಗಾಗಿ ಸಲ್ಲಿಸಿದೆ.
5. ಕಾರ್ಯಪಾಲಕ ಅಭಿಯಂತರರು (ವಿದ್ಯುತ್ ವಿಭಾಗ, ಪಶ್ಚಿಮ ವಲಯ) ರವರಿಗೆ ಮಾಹಿತಿಗಾಗಿ ಸಲ್ಲಿಸಿದೆ.
6. ಸಹಾಯಕಕಾರ್ಯಪಾಲಕ ಅಭಿಯಂತರರು (ನಾ.ಪು.) ಉಪವಿಭಾಗ/ (ಘನತ್ಯಾಜ್ಯ ನಿರ್ವಹಣೆ ವಿಭಾಗ) ರವರಿಗೆ ಮಾಹಿತಿಗಾಗಿ ಸಲ್ಲಿಸಿದೆ.
7. ಬೆಂಗಳೂರು ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿ, ರವರಿಗೆ ಮಾಹಿತಿಗಾಗಿ ಸಲ್ಲಿಸಿದೆ.
8. ಬೆಸ್ಕಾಂ ಎನ್.3/ಎನ್.6 ಉಪ ವಿಭಾಗರವರಿಗೆ ಮಾಹಿತಿಗಾಗಿ ಸಲ್ಲಿಸಿದೆ.
9. ಆರೋಗ್ಯಾಧಿಕಾರಿ (ಪಶ್ಚಿಮ)/ಹಿರಿಯಆರೋಗ್ಯ ಪರಿವೀಕ್ಷಕರು(ನಾಗಪುರ ಉಪವಿಭಾಗ/ಕಿರಿಯಆರೋಗ್ಯ ಪರಿವೀಕ್ಷಕರು ವಾರ್ಡ್-102 ರವರಿಗೆ ಮಾಹಿತಿಗಾಗಿ ಸಲ್ಲಿಸಿದೆ.
10. ಕಂದಾಯ ಅಧಿಕಾರಿಗಳು/ ಸಹಾಯಕ ಕಂದಾಯ ಅಧಿಕಾರಿಗಳು (ನಾಗಪುರ)/ ಕಂದಾಯ ಪರಿವೀಕ್ಷಕರು ವಾರ್ಡ್-102 ರವರಿಗೆ ಮಾಹಿತಿಗಾಗಿ ಸಲ್ಲಿಸಿದೆ.
11. ಠಾಣಾಧಿಕಾರಿಗಳು, ಬಸವೇಶ್ವರನಗರ/ಕಾಮಾಕ್ಷಿಪಾಳ್ಯ ಪೋಲೀಸ್‌ಠಾಣೆರವರಿಗೆ ಮಾಹಿತಿಗಾಗಿ ಸಲ್ಲಿಸಿದೆ.
12. ಕಛೇರಿ ಪ್ರತಿ.

Scanned with Oken Scanner